ಆ) ಹಾಗಿದ್ದಲ್ಲಿ ಹೆಚ್ಚುವರಿ ಕೊರಡಿಗಳನ್ನು ನಿರ್ಮಿಸಲು ಯಾವ ಕ್ರಮ ತೆಗೆದುಕೊಳ್ಳಲಾಗಿದೆ

ಇ) ಮುಂದಿನ ಶೈಕ್ಷಣಿಕ ವರ್ಷ ಪ್ರಾರಂಭವಾಗುವುದರೊಳಗೆ ಕೊರಡಿಗಳನ್ನು ನಿರ್ಮಿಸಿಕೊಡಲಾಗುವುದೇ?

ಡಾ॥ ಜಿ ಪರಮೇಶ್ವರ್ (ಉನ್ನತ ಶಿಕ್ಷಣ ಸಚಿವರು)

ಅ) ಬಂದಿದೆ

ಆ) ಅನುದಾನದ ಕೊರತೆಯಿಂದ ಕಾಮಗಾರಿಗಳನ್ನು ಕೈಗೆತ್ತಿಕೊಂಡಿರುವುದಿಲ್ಲ

ಇ) ಅನುದಾನದ ಲಭ್ಯತೆಯನ್ನು ಆಧರಿಸಿ ಕೊರಡಿ ನಿರ್ಮಿಸಲು ಕ್ರಮ ಕೈಗೊಳ್ಳಲಾಗಿದೆ

ಚಿಕ್ಕನಾಯಕನಹಳ್ಳಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡುವುದು

203 (164) ಶ್ರೀ ಸುರೇಶ್ ಬಾಬು ಸಿ ಬಿ (ಚಿಕ್ಕನಾಯಕನಹಳ್ಳಿ) ಮಾನ್ಯ ಉನ್ನತ ಶಿಕ್ಷಣ ಮತ್ತು ವಾರ್ತಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಸಮಾಜ ಶಾಸ್ತ್ರ ಹಾಗೂ ಕನ್ನಡ ಉಪನ್ಯಾಸಕರ ಹುದ್ದೆ ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ

ಆ) ಹಾಗಿದ್ದಲ್ಲಿ ಇನ್ನೆಷ್ಟು ದಿನಗಳಲ್ಲಿ ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು?

ಡಾ॥ ಜಿ ಪರಮೇಶ್ವರ್ (ಉನ್ನತ ಶಿಕ್ಷಣ ಮತ್ತು ವಾರ್ತಾ ಸಚಿವರು)

ಅ) ಹೌದು

ಆ) 1 ಚಿಕ್ಕನಾಯಕನಹಳ್ಳಿ ಸರ್ಕಾರಿ ಕಾಲೇಜಿನ ಕನ್ನಡ ವಿಭಾಗದಲ್ಲಿ 8 ಘಂಟೆ ಕಾರ್ಯಭಾರ ಮಾತ್ರ ಇರುತ್ತದೆ ಯುಜಿಸಿ ನಿಯಮಗಳನ್ವಯ 16 ಘಂಟೆ ಕಾರ್ಯಭಾರವಿದ್ದಲ್ಲಿ ಮಾತ್ರ ಒಬ್ಬ ಪೂರ್ಣಕಾಲಿಕ ಉಪನ್ಯಾಸಕರನ್ನು ನೇಮಕ ಮಾಡಬೇಕಾಗುತ್ತದೆ ಆದ್ದರಿಂದ 8 ಘಂಟೆ ಕಾರ್ಯಭಾರವನ್ನು ನಿರ್ವಹಿಸಲು ಪ್ರಾಂಶುಪಾಲರ ಹಂತದಲ್ಲಿಯೇ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಲು ಅವಕಾಶ ಕಲ್ಪಸಲಾಗಿದೆ

2 ಚಿಕ್ಕನಾಯಕನಹಳ್ಳಿ ಸರ್ಕಾರಿ ಕಾಲೇಜಿನಲ್ಲಿ ಸಮಾಜ ಶಾಸ್ತ್ರ ವಿಷಯವನ್ನು ಪ್ರಸಕ್ತ ವರ್ಷ ಬೋಧಿಸುತ್ತಿಲ್ಲದಿರುವುದರಿಂದ ಉಪನ್ಯಾಸಕರ ನೇಮಕಾತಿ ಅಗತ್ಯವಿರುವುದಿಲ್ಲ

ಅಮೂಲ್ಯ ಕಲಾಕೃತಿಗಳ ದಾಖಲೀಕರಣಕ್ಕಾಗಿ ಕಂಪ್ಯೂಟರೀಕರಣ ಕಾರ್ಯ

205 (155) ಶ್ರೀ ಯೋಗೀಶ್ ಭಟ್ ಎನ್ (ಮಂಗಳೂರು) ಮಾನ್ಯ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಅಮೂಲ್ಯ ಕಲಾಕೃತಿಗಳ ಕಲಾವಿದರ, ಸಹಿತಿಗಳ, ಕವಿಗಳನ್ನೊಳಗೊಂಡ ಸಾರಸ್ವತ ಲೋಕದ ವಿವರಗಳ ದಾಖಲೀಕರಣ ಮತ್ತು ಕಂಪ್ಯೂಟರೀಕರಣಕ್ಕಾಗಿ ಸರ್ಕಾರ ಮುಂದಾಗಿದೆಯೇ

ಆ) ಈ ಕಾರ್ಯ ಯೋಜನೆ ಯಾವಾಗಿನಿಂದ ಅನುಷ್ಠಾನಕ್ಕೆ ಬರಲಿದೆ

ಇ) ಇಂತಹವುಗಳ ಸಂರಕ್ಷಣೆಗೆ ಯಾವ ಕ್ರಮ ಕೈಗೊಳ್ಳಲಾಗುತ್ತಿದೆ

ಈ) ಇದಕ್ಕೆ ಬೇಕಾಗುವ ಆರ್ಥಿಕ ನೆರವು ಎಷ್ಟು ಇದನ್ನು ಎಲ್ಲಿಂದ ಪಡೆಯಲು ನಿರ್ಧರಿಸಲಾಗಿದೆ

ಉ) ಇದರಿಂದ ಸಾಂಸ್ಕೃತಿಕ ಲೋಕಕ್ಕೆ ಸಿಗುವ ಪ್ರಯೋಜನಗಳೇನು ವಿವರ ನೀಡುವುದು